



ಅರುಣ ಪಿ. ಭಟ್ಟ

## ವಾರಭವಿಷ್ಯ 17.12.2020ರಿಂದ 23.12.2020ರವರೆಗೆ




ವಾರದ ಆರಂಭದಲ್ಲಿ ಕೀರ್ತಿ ಪ್ರತಿಷ್ಠೆಗಳು ಲಭಿಸುತ್ತವೆ. ಇನ್ನು ಉದ್ಯೋಗಸ್ಥರಿಗೆ ಜವಾಬ್ದಾರಿ ಹೆಚ್ಚಾಗಲಿದೆ. ವಿದ್ಯಾರ್ಥಿಗಳು ಹೆಚ್ಚು ಜಾಗರೂಕರಾಗಿ ಇರಬೇಕು. ನಿಮ್ಮ ಗುರಿಯಿಂದ ಗಮನ ಬೇರೆಡೆ ಹೋಗದಂತೆ ನೋಡಿಕೊಂಡರೆ ಮಾತ್ರ ಉತ್ತಮ ಫಲಿತಾಂಶ ನಿರೀಕ್ಷೆ ಮಾಡಲು ಸಾಧ್ಯ. ಸಂಬಂಧದ ಪ್ರಾಮುಖ್ಯ ಬಹಳ ಚೆನ್ನಾಗಿ ಅರ್ಥ ಮಾಡಿಕೊಳ್ಳುತ್ತೀರಿ. ಶುಭದಿನ 20. ಗಣಪತಿಗೆ ದೂರ್ವಾರ್ಚನೆ ಮಾಡಿರಿ.




ವಾರದ ಆರಂಭದಲ್ಲಿ ದೇವತಾ ಆರಾಧನೆ ಕಡೆಗೆ ಗಮನ ಹೆಚ್ಚಿರುತ್ತದೆ. ತೀರ್ಥಕ್ಷೇತ್ರ ಪ್ರವಾಸ ಮಾಡಬೇಕು ಅಂದುಕೊಂಡವರಿಗೆ, ಹಿರಿಯರ ಸೇವೆ ಮಾಡಲು ಬಯಸುವವರಿಗೆ ಅದಕ್ಕೆ ಅವಕಾಶ ದೊರೆಯಲಿದೆ. ಉನ್ನತ ಶಿಕ್ಷಣ ಮಾಡುತ್ತಿರುವವರಿಗೆ ಉತ್ತಮ ಪ್ರಗತಿ ಇದೆ. ಮಾಮೂಲಿ ಕೆಲಸ ಕಾರ್ಯಗಳ ಹೊರತಾಗಿ ಇತರ ವಿಚಾರಗಳ ಕಡೆಗೆ ನಿಮ್ಮ ಗಮನ ಹೋಗುತ್ತದೆ. ಶುಭದಿನ 22. ಸೌಂದರ್ಯ ಲಹರಿ ಪಠಿಸಿರಿ.




ವಾರದ ಆರಂಭದಲ್ಲಿ ಕೌಟುಂಬಿಕ ವಿಚಾರದಲ್ಲಿ ಕೆಲವು ಕಷ್ಟಗಳು ಎದುರಾಗಲಿವೆ. ಈಗಾಗಲೇ ಇರುವ ಸಮಸ್ಯೆಗಳ ಜತೆಗೆ ಇದು ಕೂಡ ಸೇರ್ಪಡೆಯಾಗುತ್ತದೆ. ಆದರೆ ಹೆದರುವ ಅಗತ್ಯ ಇಲ್ಲ. ನಿಮ್ಮ ಪ್ರಯತ್ನ ಭವಿಷ್ಯದ ಯಶಸ್ಸಿಗೆ ಸಹಕಾರಿ ಆಗಿರುತ್ತದೆ. ಇದೇ ಅವಧಿಯಲ್ಲಿ ದೂರ ಪ್ರಯಾಣ ಮಾಡುವ ಸಾಧ್ಯತೆ ಇದೆ. ಶುಭದಿನ 23. ಹನುಮಾನ್ ಚಾಲಿಸ್ ಓದಿರಿ.




ವಾರದ ಆರಂಭದಲ್ಲಿ ವೈವಾಹಿಕ ಜೀವನದಲ್ಲಿ ಸಂತಸ ಇರುತ್ತದೆ. ಸಂಗಾತಿ ಜತೆ ಉತ್ತಮ ಬಾಂಧವ್ಯ ಇರಲಿದೆ. ಉದ್ಯೋಗದಲ್ಲಿ ಯಶಸ್ಸು ಪಡೆಯಲು ಸಾಕಷ್ಟು ಅವಕಾಶಗಳು ದೊರೆಯಲಿವೆ. ಆತ್ಮವಿಶ್ವಾಸ ಹೆಚ್ಚಾಗಲಿದೆ. ಇನ್ನು ಆರೋಗ್ಯದಲ್ಲಿ ಕೂಡ ಏರಿಳಿತಗಳು ಕಾಣಿಸಿಕೊಳ್ಳುತ್ತವೆ. ವಾಹನಕ್ಕೆ ಸಂಬಂಧಿಸಿದ ವಿಚಾರದಲ್ಲಿ ಕೆಲವು ಸಮಸ್ಯೆಗಳನ್ನು ಎದುರಿಸುವಂತಾಗುತ್ತದೆ. ಶುಭದಿನ 18. ಈಶ್ವರನಿಗೆ ರುದ್ರಾಭಿಷೇಕ ಮಾಡಿರಿ.




ಉದ್ಯೋಗ ನಿಮಿತ್ತವಾಗಿ ದೂರ ಪ್ರಯಾಣ ಮಾಡಬೇಕಾದ ಸನ್ನಿವೇಶ ಸೃಷ್ಟಿಯಾಗಬಹುದು. ಇನ್ನು ಆದ್ಯತೆ ಮೇಲೆ ಕೆಲಸ ಕಾರ್ಯಗಳನ್ನು ಪೂರೈಸುವುದಕ್ಕೆ ನಿರ್ಧಾರ ಮಾಡುತ್ತೀರಿ. ಈ ತೀರ್ಮಾನದಿಂದ ಭವಿಷ್ಯದಲ್ಲಿ ಅನುಕೂಲವಾಗಲಿದೆ. ಆಹಾರ ನೀರು ಸೇವನೆ ಬಗ್ಗೆ ಹೆಚ್ಚು ಲಕ್ಷ್ಯ ಇರಲಿ. ಹಿರಿಯರಿಗೆ ಮಂಡಿ ನೋವು ಕಾಣಿಸಿಕೊಳ್ಳಬಹುದು. ಶುಭದಿನ 22. ಶ್ರೀವೆಂಕಟೇಶ್ವರ ಸ್ತೋತ್ರ ಪಠಿಸಿರಿ.




ಮಕ್ಕಳ ಪ್ರಗತಿಯಿಂದ ಸಂತಸ ಹೆಮ್ಮೆ ಉಂಟಾಗುತ್ತದೆ. ಅವರ ಭವಿಷ್ಯದ ಬಗ್ಗೆ ಹೆಚ್ಚು ಗಮನ ನೀಡುತ್ತೀರಿ. ವಾರದ ದ್ವಿತೀಯಾರ್ಧದಲ್ಲಿ ಆದಾಯ ಅತ್ಯುತ್ತಮವಾಗಿ ಇರುತ್ತದೆ. ಸಂಗಾತಿ ಜತೆ ಬಾಂಧವ್ಯ ಗಟ್ಟಿಯಾಗಿರುತ್ತದೆ. ಕಾನೂನು ವ್ಯಾಜ್ಯಗಳು ನಡೆಯುತ್ತಿದ್ದಲ್ಲಿ ನಿಮ್ಮ ಪರವಾಗಿ ಬೆಳವಣಿಗೆಗಳು ನಡೆಯಲಿವೆ. ಆರೋಗ್ಯ ಸಮಸ್ಯೆಗಳು ಕಾಡಬಹುದು. ಶುಭದಿನ 19. ವಿಷ್ಣು ಸಹಸ್ರನಾಮ ಪಠಿಸಿರಿ.




ವಾರದ ಶುರುವಿನಲ್ಲಿ ಮ್ಯಾನೇಜ್ ಮೆಂಟ್, ರಾಜಕೀಯ ಕ್ಷೇತ್ರದಲ್ಲಿ ಇರುವವರಿಗೆ ಯಶಸ್ಸಿದೆ. ವ್ಯಾಪಾರಸ್ಥರಿಗೆ ಉತ್ತಮ ಸಮಯ ಇದು. ಈ ಅವಧಿಯಲ್ಲಿ ಆರೋಗ್ಯವೂ ಉತ್ತಮವಾಗಿರುತ್ತದೆ. ಉದ್ಯೋಗಿಗಳಿಗೆ ದೊರೆಯುತ್ತಿರುವ ಸವಲತ್ತು ಮತ್ತಷ್ಟು ವಿಸ್ತರಣೆಯಾಗಲಿದೆ. ವಾರದ ಮಧ್ಯಭಾಗದಲ್ಲಿ ಕೆಲಸ ಕಾರ್ಯಗಳು ವಿಪರೀತ ವೇಗವಾಗಿ ಪೂರ್ಣಗೊಳ್ಳುತ್ತವೆ. ಶುಭದಿನ 21. ಲಿಂಗಾಷ್ಟಕ ಪಠಿಸಿರಿ.




ವಾರದ ಶುರುವಿನಲ್ಲಿ ನಿಮ್ಮ ಸಾಮರ್ಥ್ಯ ಹೆಚ್ಚಲಿದೆ. ಕೌಟುಂಬಿಕ ಜೀವನದಲ್ಲೂ ಅದೃಷ್ಟ ನಿಮ್ಮ ಪಾಲಿಗೆ ಇರಲಿದೆ. ಸೈನ್ಯ, ಭದ್ರತೆ, ಶಿಕ್ಷಣ ಹಾಗೂ ಆರ್ಥಿಕ ವ್ಯವಹಾರಗಳನ್ನು ನೋಡಿಕೊಳ್ಳುತ್ತಿರುವವರಿಗೆ ಉತ್ತಮ ಪ್ರಗತಿ ಇದೆ. ಮಾಹಿತಿ ಹಾಗೂ ಸಂವಹನ ಕ್ಷೇತ್ರದಲ್ಲಿ ಇರುವವರಿಗೆ ಗೌರವ ಹೆಚ್ಚಾಗಲಿದೆ. ಜತೆಗೆ ಯಶಸ್ಸು ನಿಮ್ಮ ಪಾಲಿಗೆ ಸಿಗಲಿದೆ. ಶುಭದಿನ 20. ಚಂಡಿ ಪಾರಾಯಣ ಮಾಡಿರಿ.




ವಾರದ ಶುರುವಿನಲ್ಲಿ ಭೂಮಿ ಖರೀದಿ ಪ್ರಕ್ರಿಯೆಯಲ್ಲಿ ತೊಡಗಲಿದ್ದೀರಿ. ವ್ಯಾಜ್ಯಗಳು ಇದ್ದಲ್ಲಿ ಅವುಗಳನ್ನು ನಿವಾರಿಸಿಕೊಳ್ಳಲು ಸಫಲರಾಗುತ್ತೀರಿ. ವಾಸ್ತವದಲ್ಲಿ ಸಂತೋಷ ಪಡುವುದಕ್ಕೆ ಬೇಕಾದ ಸೌಕರ್ಯಗಳನ್ನು ಪಡೆಯಲಿದ್ದೀರಿ. ಕೆಲವು ಕೆಲಸಗಳನ್ನು ಪೂರ್ಣ ಮಾಡಬೇಕಾದ ಅನಿವಾರ್ಯಕ್ಕೆ ಸಿಲುಕಿಕೊಂಡು ನೀವು ಸ್ವತಃ ಅಖಾಡಕ್ಕೆ ಇಳಿಯಬೇಕಾಗುತ್ತದೆ. ಶುಭದಿನ 19. ಗಣಪತಿ ಸುಬ್ರಮಣ್ಯ ಜಪ ಮಾಡಿರಿ.




ವಾರದ ಶುರುವಿನಲ್ಲಿ ವೃತ್ತಿ ಜೀವನದಲ್ಲಿ ದೊರೆಯುವ ಅವಕಾಶಗಳನ್ನು ಸದ್ಬಳಕೆ ಮಾಡಲು ಗಮನ ಇರುತ್ತದೆ. ನಿಮ್ಮ ಶ್ರಮಕ್ಕೆ ತಕ್ಕ ಪ್ರತಿಫಲ ದೊರೆಯಲಿದೆ. ನಿಮ್ಮ ವ್ಯವಹಾರಗಳ ವಿಸ್ತರಣೆಗೆ ಅನುಕೂಲ ಆಗಲಿದೆ. ಭೂಮಿ ಖರೀದಿ ಬಗ್ಗೆ ಆಸಕ್ತರಾಗಿದ್ದಲ್ಲಿ ಇದು ಸೂಕ್ತ ಸಮಯ. ನಿಮ್ಮ ಪ್ರಾಮಾಣಿಕ ಪ್ರಯತ್ನದಿಂದ ಯಶಸ್ಸು ಸಾಧಿಸಲಿದ್ದೀರಿ. ಶುಭದಿನ 23. ನವದುರ್ಗಾ ಆರಾಧನೆ ಮಾಡಿರಿ.




ವಾರದ ಆರಂಭದಲ್ಲಿ ನೀವು ಅಂದುಕೊಂಡ ಕೆಲಸಗಳನ್ನು ಶುರು ಮಾಡುವುದಕ್ಕೆ ಸೂಕ್ತ ಸಮಯ. ಪ್ರತಿಭೆಯನ್ನು ಹೆಚ್ಚಿಸಿಕೊಳ್ಳಲು ಅಗತ್ಯವಾದ ವೇದಿಕೆಯನ್ನು ಸಿದ್ಧ ಮಾಡಿಕೊಳ್ಳುತ್ತೀರಿ. ನಿಮ್ಮ ವಿವೇಚನಾಶಕ್ತಿ ಹಾಗೂ ಧೈರ್ಯ ಅಗಾಧ ಪ್ರಮಾಣದಲ್ಲಿ ಹೆಚ್ಚಲಿದೆ. ವ್ಯಾಪಾರ ಒಪ್ಪಂದವನ್ನು ಪೂರ್ಣಗೊಳಿಸುವ ಸಲುವಾಗಿ ಹೆಚ್ಚು ಹಣ, ಸಮಯ ಮೀಸಲಿಡಬೇಕಾಗುತ್ತದೆ. ಶುಭದಿನ 20. ಶ್ರೀರಾಮರಕ್ಷಾ ಸ್ತೋತ್ರ ಪಠಿಸಿರಿ.




ವಾರದ ಶುರುವಿನಲ್ಲಿ ಕೆಲಸ ಕಾರ್ಯಗಳನ್ನು ಪೂರೈಸಲು ಉದ್ಯೋಗ ಸ್ಥಳದಲ್ಲಿ ಶ್ರಮಿಸಲಿದ್ದೀರಿ. ಆ ನಿಮ್ಮ ಶ್ರಮಕ್ಕೆ ತಕ್ಕಂತೆ ಫಲಿತಾಂಶ ದೊರೆಯಲಿದೆ. ವಾರದ ಮಧ್ಯ ಭಾಗದಲ್ಲಿ ಸಣ್ಣ ಪುಟ್ಟ ವಿಚಾರಗಳಿಗೂ ಬಿಕ್ಕಟ್ಟು ಎದುರಾಗಲಿದೆ. ವೈವಾಹಿಕ ಜೀವನವು ಸಂತುಷ್ಟವಾಗಿರುತ್ತದೆ. ಉದ್ಯಮಿಗಳು ಹಲವು ಬಗೆಯಲ್ಲಿ ಲಾಭ ಕಾಣಲು ಸಾಧ್ಯವಾಗಲಿದೆ. ಶುಭದಿನ 22. ಲಕ್ಷ್ಮೀನಾರಾಯಣ ಹೃದಯ ಪಾರಾಯಣ ಮಾಡಿರಿ.